# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ದಕ್ಷಿಣ ವಲಯ**

**ಬೈರಸಂದ್ರ , ವಾರ್ಡ ಸಂಖ್ಯೆ: 169**

**ದಿನಾಂಕ:11.04.2022 ರಂದು ವಾರ್ಡ ಸಂಖ್ಯೆ 169 ಬೈರಸಂದ್ರ ವಾರ್ಡನಲ್ಲಿ ನಡೆದ ವಾರ್ಡ ಸಮಿತಿ ಸಭೆ:**

## -: ಸಮಿತಿ ಸಭೆಯ ನಡವಳಿಗಳು :-

ವಾರ್ಡ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳು ಮತ್ತು ವಾರ್ಡ್ ಸಮಿತಿ ಸದಸ್ಯರು:-

| ಕ್ರಮ ಸಂಖ್ಯೆ | ಹೆಸರು | ಹುದ್ದೆ |
|---|---|---|
| 01 | ಶ್ರೀ ವಾಲೂ ರಾಥೋಡ್ | ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು |
| 02 | ಶ್ರೀ ಚಂದ್ರಶೇಖರ್ ವಿ | ಕಾರ್ಯಾದರ್ಶಿ ಮತ್ತು ಸಂಚಾಲಕರು |
| 03 | ಶ್ರೀ ನರೇಂದ್ರ ಬಾಬು | ಅರಣ್ಯ ಇಲಾಖೆ (ದಕ್ಷಿಣ) , ಬಿ.ಬಿ.ಎಂ.ಪಿ |
| 04 | ಶ್ರೀಮತಿ ಶಶಿಕಲಾ ಟಿ ಜೆ | ಸ.ಕಾ.ನಿ.ಅ, SWM, ಬಿ.ಬಿ.ಎಂ.ಪಿ ಜಯನಗರ |
| 05 | ಕುಮಾರಿ ಪೂನಂ | ಹಿರಿಯ ಆರೋಗ್ಯ ನಿರೀಕ್ಷಕರು, ಬಿ.ಬಿ.ಎಂ.ಪಿ |
| 06 | ಶ್ರೀ ರಮೇಶ್ ವಿ ಬಿ | ಕಿರಿಯ ಆರೋಗ್ಯ ನಿರೀಕ್ಷಕರು, ಬಿ.ಬಿ.ಎಂ.ಪಿ |
| 07 | ಶ್ರೀ ಕಲ್ಯಾಣ್ ಮೋಹನ್.ಜಿ | ಕಿರಿಯ ಆರೋಗ್ಯ ನಿರೀಕ್ಷಕರು, ಬಿ.ಬಿ.ಎಂ.ಪಿ |
| 08 | ಶ್ರೀ ಶ್ರೀನಿವಾಸನ್ ಎಮ್ | ಎಲ್.ಐ.ಸಿ ಕಾಲೋನಿ ನಿವಾಸಿಗಳ ಸಂಘ |
| 09 | ಶ್ರೀ ಪರಮೇಶ್ವರನ್ ಟಿ ಕೆ | ಎಲ್.ಐ.ಸಿ ಕಾಲೋನಿ ನಿವಾಸಿಗಳ ಸಂಘದ ಕಾರ್ಯಾದರ್ಶಿ |
| 10 | ಶ್ರೀ ಬಾಬು ರಾವ್ | ಎಲ್.ಐ.ಸಿ ಕಾಲೋನಿ ನಿವಾಸಿಗಳ ಸಂಘದ ಅಧ್ಯಕ್ಷರು |

ವಾರ್ಡ ಸಮಿತಿ ಅದ್ಯಕ್ಷರು ಸಭೆಗೆ ಹಾಜರಿದ್ದ ಎಲ್ಲಾ ಸದಸ್ಯರು ಮತ್ತು ಅಧಿಕಾರಿ ವರ್ಗದವರಿಗೆ ಸ್ವಾಗತ ಕೋರುತ್ತಾ , ಸಭೆಯನ್ನು ಪ್ರಾರಂಭಿಸಿದರು.

1. ಮಾನ್ಯ ನೋಡಲ್ ಅಧಿಕಾರಿಗಳು ಮಾತನಾಡುತ್ತಾ 21.03.2022 ರಂದು ತಿಳಿಸಿದ ಸಾರ್ವಜನಿಕರು ಮತ್ತು ನೌಕರರು ತಿಳಿಸಿದ ಸಮಸ್ಯೆಗಳ ಬಗ್ಗೆ ಮಾಹಿತಿ ಪಡೆದುಕೊಂಡರು.

2. ವಾರ್ಡ ಸಂಖ್ಯೆ 169 ರಲ್ಲಿನ ಬೈರಸಂದ್ರ ಮುಖ್ಯರಸ್ತೆಯಲ್ಲಿರುವ ಪರಿಮಳ ಮೆಡಿಕಲ್ ಹತ್ತಿರ ಪಾದಚಾರಿ ಮಾರ್ಗದ ಮೇಲೆ ಪೆಟ್ಟಿ ಅಗಂಡಿಗಳನ್ನು ಇಟ್ಟುಕೊಂಡು ವ್ಯಾಪರ ಮಾಡುತ್ತಿದ್ದು ಇದರಿಂದ ಸಾರ್ವಜನಿಕ ಸಂಚಾರಕ್ಕೆ ತೊಂದರೆ ಆಗುತ್ತಿದ್ದು. ಕೊಡಲೇ ಪಾದಚಾರಿ ಮಾರ್ಗದ ಮೇಲೆ ಇಟ್ಟಿರುವ ಪೆಟ್ಟಿ ಅಗಂಡಿಗಳನ್ನು ತೆರವುಗೊಳ್ಳಿಸಲು ಸಭೆಯಲ್ಲಿ ಕೋರಿದರು. **(ಕ್ರಮ: ಆರೋಗ್ಯಾಧಿಕಾರಿಗಳು, ಬಿ.ಬಿ.ಎಂ.ಪಿ ಜಯನಗರ)**

3. LIC ಕಾಲೋನಿನಲ್ಲಿರುವ ಅನೇಕ ಮ್ಯಾನ್‌ಹೋಲ್ (Manhole) ಗಳಲ್ಲಿ ಹೊಳು ತುಂಬಿಕೊಂಡಿದ್ದು, ಮ್ಯಾನ್‌ಹೋಲ್‌ಗಳಲ್ಲಿರುವ ಹೂಳುನ್ನು ತೆಗೆಯಲು ಸಭೆಯಲ್ಲಿ ಕೋರಿದರು. **(ಕ್ರಮ: ಸ.ಕಾ.ನಿ.ಅ, BWSSB, ಜಯನಗರ)**

Scanned with CamScanner

4. ವಾರ್ಡ ಸಂಖ್ಯೆ 169 ನಲ್ಲಿರುವ ಬೃಹತ್ ನೀರುಗಾಲುವೆಯನ್ನು ನಿರ್ಮಾಣ ಮಾಡಿದ್ದು ಅದರೆ ರಸ್ತೆಯ ಮಳೆನೀರು ರಸ್ತೆಯಿಂದ ಚರಂಡಿಗೆ ಸರಗವಾಗಿ ಹರಿಯಲು Shoulder Drian ಗಳನ್ನು ನಿರ್ಮಾಣ ಮಾಡಿರುವುದಿಲ್ಲ. ಇದರ ಬಗ್ಗೆ ಕ್ರಮ ವಹಿಸಲು ಸಭೆಯಲ್ಲಿ ಕೋರಿದರು. **(ಕ್ರಮ: ಸ.ಕಾ.ನಿ.ಅ, ಬೃಹತ್ ನೀರುಗಾಲುವೆ, ಬಿ.ಬಿ.ಎಂ.ಪಿ ಜಯನಗರ)**

5. 10ನೇ ಅಡ್ಡರಸ್ತೆಯಲ್ಲಿರುವ ಗಣೇಶ ದೇವಸ್ಥಾನ ಹಿಂದಗಡೆಯಲ್ಲಿರುವ ಖಾಲಿ ಜಾಗದಲ್ಲಿ ಕಸ ಸಂಗ್ರಹಣೆ ವಾಹನಗಳನ್ನು ನಿಲ್ಲಿಸಲು ಅವಕಾಶವಿದ್ದು ಇದರ ಬಗ್ಗೆ ಕ್ರಮವಹಿಸಲು ಸಭೆಯಲ್ಲಿ ಕೋರಿದರು. **(ಕ್ರಮ: ಸ.ಕಾ.ನಿ.ಅ, SWM, ಬಿ.ಬಿ.ಎಂ.ಪಿ ಜಯನಗರ)**

6. 10ನೇ ಅಡ್ಡರಸ್ತೆಯಲ್ಲಿರುವ ಗಣೇಶ ದೇವಸ್ಥಾನ ಹಿಂದಗಡೆಯಲ್ಲಿರುವ ಖಾಲಿ ಜಾಗದಲ್ಲಿ ಕಸ ಸಂಗ್ರಹಣೆ ವಾಹನಗಳನ್ನು ನಿಲ್ಲಿಸಲು ಅವಕಾಶವಿದ್ದು ಇದರ ಬಗ್ಗೆ ಕ್ರಮವಹಿಸಲು ಸಭೆಯಲ್ಲಿ ಕೋರಿದರು. **(ಕ್ರಮ: ಸ.ಕಾ.ನಿ.ಅ, SWM, ಬಿ.ಬಿ.ಎಂ.ಪಿ ಜಯನಗರ)**

7. LIC ಕಾಲೋನಿನಲ್ಲಿರುವ 3ನೇ ಅಡ್ಡರಸ್ತೆ, 4ನೇ ಅಡ್ಡರಸ್ತೆ ಮತ್ತು 5ನೇ ಅಡ್ಡರಸ್ತೆ ನಲ್ಲಿರುವ ಮರದ ಉದ್ದವಾಗಿರುವ ಕೊಂಬೆಗಳು ಬೀಳುವ ಸ್ಥಿತಿಯಲ್ಲಿದ್ದು. ಸದರಿ ರಸ್ತೆಗಳಲ್ಲಿರುವ ಮರದ ಕೊಂಬೆಗಳನ್ನು ಕತ್ತರಿಸುವಂತೆ ಸಭೆಯಲ್ಲಿ ಕೋರಿದರು. **(ಅರಣ್ಯ ಇಲಾಖೆ (ದಕ್ಷಿಣ) ಬಿ.ಬಿ.ಎಂ.ಪಿ ಜಯನಗರ)**

8. ವಾರ್ಡ ಸಂಖ್ಯೆ 169 ರಲ್ಲಿನ ಬೈರಸಂದ್ರ ವ್ಯಾಪ್ತಿಯ BWSSB ಕಛೇರಿ ಹತ್ತಿರಿರುವ ಕಸದ ತೊಟ್ಟಿ ತುಂಬಾ ಹಳೆಯದಾಗಿದ್ದು ಮತ್ತು ಪ್ರಸ್ತುತ ಈ ತೊಟ್ಟಿಯನ್ನು ಉಪಯೋಗಿಸುತ್ತಿರುವುದಿಲ್ಲ. ಅದ್ದರಿಂದ ಸದರಿ ಕಸದ ತೊಟ್ಟಿಯನ್ನು ತೆರವುಗೊಳ್ಳಸುವಂತೆ ಸಭೆಯಲ್ಲಿ ಕೋರಿದರು. **(ಕ್ರಮ: ಕಿ.ಅ, ವಾಡ್-169 ಬಿ.ಬಿ.ಎಂ.ಪಿ)**

**ನಿರ್ಣಯ:** ಈ ವಿಷಯಕ್ಕೆ ಸಮಿತಿಯು ಒಪ್ಪಿಗೆ ತಿಳಿಸಿರುತ್ತಾರೆ. ಕೊನೆಯದಾಗಿ ಸದಸ್ಯ ಕಾರ್ಯದರ್ಶಿಗಳು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಅಧಿಕಾರಿಗಳಿಗೆ ವಂದನೆಯನ್ನು ತಿಳಿಸುತ್ತಾ, ಇಂದಿನ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಬಗ್ಗೆ ಕೈಗೊಂಡಿರುವ ಕ್ರಮಗಳನ್ನು ಮುಂದಿನ ಸಭೆಯಲ್ಲಿ ಪೂರ್ಣ ಮಾಹಿತಿಯನ್ನು ಒದಗಿಸಬೇಕೆಂದು ಕಾರ್ಯದರ್ಶಿ ಮತ್ತು ಇಲಾಖಾ ಅಧಿಕಾರಿಗಳಿಗೆ ತಿಳಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಶ್ರೀ ಚಂದ್ರಶೇಖರ್. ವಿ)
ಕಾರ್ಯದರ್ಶಿ ಮತ್ತು ಸಂಚಾಲಕರು
ವಾರ್ಡ್ ಸಮಿತಿ ಸಭೆ
ವಾರ್ಡ-169, ಬೈರಸಂದ್ರ

Scanned with CamScanner